ಹೆಡಗಿನಾಳ ಗ್ರಾಮದಲ್ಲಿ ಬ್ಯಾರೇಜ್ ನಿರ್ಮಿಸುವುದು

338 (413) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭದ್ರಾ ನದಿಗೆ ಸಿಂಧನೂರು ತಾಲ್ಲೂಕಿನ ಹೆಡಗಿನಾಳ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬ್ಯಾರೇಜ್ ನಿರ್ಮಾಣಕ್ಕಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು;

ಇ) ಹಾಗಿದ್ದಲ್ಲಿ, ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಈ) ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ತ್ವರಿತವಾಗಿ ಪೂರೈಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಿ ಮುಕ್ತಾಯಗೊಳಿಸಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):

ಅ) ಇದೆ.

ಆ) 2010–11ನೇ ಸಾಲಿನಲ್ಲಿ ಸಮತೋಲನಾ ಜಲಾಶಯಗಳು, ಪಿಕ್‌ಗಳ ಅಡಿಯಲ್ಲಿ ರೂ. 10.00 ಲಕ್ಷಗಳ ಸಾಂಕೇತಿಕ ಅನುದಾನ ನೀಡಲಾಗಿದೆ.

ಇ) 2011–12ನೇ ಸಾಲಿನಲ್ಲಿ ಅವಶ್ಯವಿರುವ ಅನುದಾನವನ್ನು ಒದಗಿಸಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಈ) ಇಲ್ಲ

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಯಚೂರು ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನ

339 (414) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕಳೆದ 3 ವರ್ಷಗಳಿಂದ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; (ವರ್ಷಾವಾರು ವಿವರಗಳನ್ನು ನೀಡುವುದು)

ಆ) ಈ ಅನುದಾನದಿಂದ ರಾಯಚೂರು ಜಿಲ್ಲೆಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ;